ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪ್ರಶಸ್ತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 22/01/2020

## ಕೋರೆಗೆ 'ಡಾಕ್ಟರ್ ಆಫ್ ಸೈನ್ಸ್' ಗೌರವ

**ಬೆಳಗಾವಿ:** ಶಿಕ್ಷಣ, ವೈದ್ಯಕೀಯ ಸೇವೆ ಹಾಗೂ ಸಂಶೋಧನೆಗಳ ಮೂಲಕ ಸಮಾಜದ ಉನ್ನತಿಗೆ ಸಲ್ಲಿಸಿದ ಸೇವೆ ಪರಿಗಣಿಸಿ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರೂ ಆಗಿರುವ ರಾಜ್ಯಸಭಾ ಸದಸ್ಯ ಡಾ.ಪ್ರಭಾಕರ ಕೋರೆ ಅವರಿಗೆ ಅಮೆರಿಕದ ಪ್ರತಿಷ್ಠಿತ ಥಾಮಸ್ ಜೆಫರ್ಸನ್ ವಿಶ್ವವಿದ್ಯಾಲಯ 'ಡಾಕ್ಟರ್ ಆಫ್ ಸೈನ್ಸ್' ಪದವಿ ನೀಡಿ ಗೌರವಿಸಿದೆ.



ಕೆಎಲ್‌ಇ ವಿವಿ ಕುಲಪತಿ ಡಾ.ವಿವೇಕ ಸಾವೋಜಿ ಮಂಗಳವಾರ ಸುದ್ದಿಗಾರರಿಗೆ ಈ ವಿಷಯ ತಿಳಿಸಿದರು. "ಈ ಕೋರೆಯವರು ಈ ಗೌರವ ಪಡೆಯುತ್ತಿರುವ ದೇಶದ ಮೊದಲ ವ್ಯಕ್ತಿ." ಎಂದರು.

'ಮೇ 20ರಂದು ಅಮೆರಿಕಾದ ಫಿಲಡೆಲ್ಫಿಯಾದ ಥಾಮಸ್ ಜೆಫರ್ಸನ್ ವಿವಿಯಲ್ಲಿ ನಡೆಯುವ ಘಟಿಕೋತ್ಸವದಲ್ಲಿ ಪದವಿ ಪ್ರದಾನ ನಡೆಯಲಿದೆ.

"ಕೆಎಲ್‌ಇ ಸಂಸ್ಥೆಯನ್ನು ಜಾಗತಿಕ ಮಟ್ಟದಲ್ಲಿ ಗುರುತಿಸುವಂತೆ ಮಾಡುವಲ್ಲಿ ಡಾ.ಪ್ರಭಾಕರ ಕೋರೆ ಅವರು ಸಲ್ಲಿಸಿದ ಸೇವೆ-ಸಾಧನೆಯನ್ನು ವಿವಿ ಪರಿಗಣಿಸಿದೆ.